# ಜಿಲ್ಲಾ ಪಂಚಾಯತ ಕಾರ್ಯಾಲಯ ಬೀದರ

ಸಂ: ಜಿಪಂಬೀ/ಖಾಗ್ರಾಕೈ/ಆನ್‌ಲೈನ್ ಅರ್ಜಿ/2024-25 ದಿನಾಂಕ: 20-08-2024.

## ಅಧಿಸೂಚನೆ

2024-25ನೇ ಸಾಲಿನ ಜಿಲ್ಲಾ ಉದ್ಯಮ ಕೇಂದ್ರ ಯೋಜನೆಯಡಿ ಉಚಿತ ವಿದ್ಯುತ್ ಚಾಲಿತ ಹೊಲಿಗೆ ಯಂತ್ರ ವಿತರಣೆಗಾಗಿ ಗ್ರಾಮೀಣ ಮಹಿಳಾ ಅಭ್ಯರ್ಥಿಗಳಿಂದ ದಿನಾಂಕ 27-08-2024 ರಿಂದ ದಿನಾಂಕ 25-09-2024 ರವರೆಗೆ ವೆಬ್‌ಸೈಟ್ https://bidar.nic.in ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಹತೆಗಳು :**

1) ವಿದ್ಯುತ್ ಚಾಲಿತ ಹೊಲಿಗೆ ಯಂತ್ರ ಪಡೆಯುವುದಕ್ಕಾಗಿ ಬೀದರ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ವಾಸವಿರುವ ಮಹಿಳಾ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.
2) ಅರ್ಜಿ ಸಲ್ಲಿಸುವ ಅಭ್ಯರ್ಥಿಯ ವಯಸ್ಸು: ಕನಿಷ್ಠ 18 ವರ್ಷ ಹಾಗೂ ಗರಿಷ್ಠ 45 ವರ್ಷಗಳು (ಅರ್ಜಿ ಸಲ್ಲಿಸುವ ಪ್ರಾರಂಭದ ದಿನಾಂಕವಾದ 27-08-2024 ರಂದು).
3) ಅರ್ಜಿದಾರರು ಕನಿಷ್ಠ 10ನೇ ತರಗತಿ ಉತ್ತೀರ್ಣರಾಗಿರಬೇಕು.
4) ಈಗಾಗಲೇ ಸರ್ಕಾರದ ಯಾವುದೇ ಯೋಜನೆಯಡಿ ಹೊಲಿಗೆ ಯಂತ್ರಗಳನ್ನು ಪಡೆದಿರುವ ಫಲಾನುಭವಿಗಳು ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.
5) ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರು ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.
6) ಆನ್‌ಲೈನ್‌ನಲ್ಲಿ https://bidar.nic.in ವೆಬ್‌ಸೈಟ್ ಮುಖಾಂತರ ಅರ್ಜಿ ಭರ್ತಿ ಮಾಡಿ ಮತ್ತು ಸಂಬಂಧಿಸಿದ ದಾಖಲೆಗಳ ಸ್ವಯಂ ಧೃಢೀಕೃತ ಪ್ರತಿಗಳು ಅಪ್ಲೋಡ್ ಮಾಡುವ ಮೂಲಕ ನಿಗದಿತ ದಿನಾಂಕದೊಳಗಾಗಿ ಅರ್ಜಿ ಸಲ್ಲಿಸುವುದು.

**ಅಪ್ಲೋಡ್ ಮಾಡಬೇಕಾದ ದಾಖಲೆಗಳು (ಸ್ವಯಂ ಧೃಢೀಕೃತ ಪ್ರತಿಗಳು) :**

1) ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರ (in JPG format)
2) ಜನ್ಮ ದಿನಾಂಕ ನಮೂದಿಸಿರುವ ದಾಖಲೆ (ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ / ವರ್ಗಾವಣೆ ಪ್ರಮಾಣ ಪತ್ರ / ಜನ್ಮ ದಿನಾಂಕ ಪ್ರಮಾಣ ಪತ್ರ / ಇನ್ನಿತರೆ ಪ್ರಮಾಣ ಪತ್ರ (in PDF format)
3) ಆಯಾ ಗ್ರಾಮ ಪಂಚಾಯತಿಯ, ಪಂಚಾಯತ್ ಅಭಿವೃದ್ಧಿ ಅಧಿಕಾರಿಯವರಿಂದ ಹೊಲಿಗೆ (ಟೇಲರಿಂಗ್) ವೃತ್ತಿ ಮಾಡುತ್ತಿರುವ ಬಗ್ಗೆ ಧೃಢೀಕರಣ ಪ್ರಮಾಣ ಪತ್ರ
4) ಶೈಕ್ಷಣಿಕ ಅರ್ಹತೆ (ಅಂಕಪಟ್ಟಿ / ವರ್ಗಾವಣೆ ಪ್ರಮಾಣ ಪತ್ರ) (in PDF format)
5) ಜಾತಿ ಪ್ರಮಾಣ ಪತ್ರ (in PDF format)
6) ಪಡಿತರ ಚೀಟಿ (in PDF format)

**ಆಯ್ಕೆ ಪ್ರಕ್ರಿಯೆ :**

ನಿಗದಿಪಡಿಸಿರುವ ಗುರಿಗಿಂತ ಅಧಿಕ ಅರ್ಹ ಅರ್ಜಿಗಳು ಸ್ವೀಕೃತವಾದಲ್ಲಿ, ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿಯಿಂದ ಲಾಟರಿ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಖಾದಿ ಮತ್ತು ಗ್ರಾಮೀಣ ಕೈಗಾರಿಕೆ, ಜಿಲ್ಲಾ ಪಂಚಾಯತ್, ನೌಬಾದ, ಬೀದರ ಇವರನ್ನು ಅಥವಾ ಆಯಾ ತಾಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿಗಳನ್ನು ಸಂಪರ್ಕಿಸಬಹುದು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ್, ಬೀದರ.